## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 201 ಇಎಸ್‌ಟಿ(7)2016 |46P

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 22/05/2017.

### ಸುತ್ತೋಲೆ

**ವಿಷಯ:** ಇಲಾಖೆಯ ಅಧೀನದಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರ ಸೇವಾ ವಿಷಯಗಳು, ವೈಯಕ್ತಿಕ ಮತ್ತು ಇನ್ನಿತರೇ ಮನವಿಗಳನ್ನು ಸೂಕ್ತ ಪ್ರಸ್ತಾವನೆಯೊಂದಿಗೆ ನಿರ್ದೇಶನಾಲಯಕ್ಕೆ ಕಳುಹಿಸುವ ಬಗ್ಗೆ

**ಉಲ್ಲೇಖ:** 1. ಈ ಕಛೇರಿಯ ಸುತ್ತೋಲೆ ಸಂಖ್ಯೆ:ಡಿಟಿಇ/201/ಇಎಸ್‌ಟಿ(7) 2016, ದಿನಾಂಕ:21.02.2017.

-ಃ-

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಉಲ್ಲೇಖ(1)ರ ದಿನಾಂಕ:21.02.2017 ರ ಸುತ್ತೋಲೆಯಲ್ಲಿ ಇಲಾಖೆಯ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸೇವಾ ವಿಷಯಗಳು, ವೈಯಕ್ತಿಕ ಮತ್ತು ಇನ್ನಿತರೆ ಮನವಿಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರು ಹಿಂಬರಹದ ಮೂಲಕ ಸಲ್ಲಿಸದೇ, ಸದರಿ ಮನವಿಯು ಸರ್ಕಾರದ ಆದೇಶ ಮತ್ತು ನಿಯಮಗಳನ್ವಯ ಮತ್ತು ಸಂಬಂಧಪಟ್ಟ ದಾಖಲಾತಿಗಳು ಕ್ರಮಬದ್ಧವಾಗಿದೆಯೇ ಎಂಬ ಬಗ್ಗೆ ಕೂಲಂಕುಶವಾಗಿ ಪರಿಶೀಲಿಸಿ ತಮ್ಮ ಸ್ಪಷ್ಟ ಅಭಿಪ್ರಾಯ ಮತ್ತು ಸೂಕ್ತ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದ್ದರೂ ಸಹ, ಸಿಬ್ಬಂದಿಯವರು ಸಲ್ಲಿಸುವ ಸಂಸ್ಥೆಯ ಮನವಿಗಳನ್ನು ಅನೇಕ ಸಂಸ್ಥೆಗಳ ಪ್ರಾಂಶುಪಾಲರು ಹಿಂಬರಹವ ಮೂಲಕ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯಕ್ಕೆ ಕಳುಹಿಸುವ ಪರಿಪಾಠವನ್ನು ಮುಂದುವರಿಸಿರುವುದು ಕಂಡು ಬಂದಿದೆ. ಇದೇ ಪರಿಪಾಠವನ್ನು ಮುಂದುವರಿಸುವಂತಹ ಪ್ರಾಂಶುಪಾಲರುಗಳ ವಿರುದ್ಧ ಕರ್ನಾಟಕ ಸೇವಾ ನೌಕರರ (ವರ್ತನೆ) ನಿಯಮಗಳು 1966 ರ ಉಲ್ಲಂಘನೆ ಎಂದು ಪರಿಗಣಿಸಿ, ಕರ್ನಾಟಕ ನಾಗರೀಕ ಸೇವಾ(ಸಿ.ಸಿ.ಎ) ನಿಯಮಗಳು 1957 ರಡಿಯಲ್ಲಿ ಕರ್ನಾಟಕ ಖಾಸಗಿ ಶೈಕ್ಷಣಿಕ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮಗಳು 1978 ರನ್ವಯ ಶಿಸ್ತು ಕ್ರಮ ಕೈಗೊಳ್ಳಲು ಕ್ರಮವಹಿಸಲಾಗುವುದೆಂದು ಮತ್ತೊಮ್ಮೆ ಸೂಚಿಸಿದೆ.

ನಿರ್ದೇಶಕರು

ಇವರಿಗೆ,

1. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
2. ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರುಗಳ ಮೂಲಕ -ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ

ಪ್ರತಿ:

1. ನಿರ್ದೇಶನಾಲಯದ ಎಲ್ಲಾ ಅಧಿಕಾರಿ /ಸಿಬ್ಬಂದಿ ವರ್ಗದವರಿಗೆ
2. ಇ-ಆಡಳಿತ ವಿಭಾಗಕ್ಕೆ -ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು
3. ನಿರ್ದೇಶಕರ ಆಪ್ತ ಶಾಖೆಗೆ
4. ರಕ್ಷಾ ಕಡತಕ್ಕೆ
5. 5. ಕಛೇರಿ ಪ್ರತಿ.